# AGENDA

1. Invocation: **Shalini (Bharatanatyam)**
2. Video Clip Playing
3. Welcome Speech :
4. Lighting of Lamp : **Dignitaries**
5. Launch of Autonomy & Release of First Year Syllabus Copy
6. Guest Introduction :
7. Felicitation to Guests :

   Address by Guests

   - **Dr. Prabha Mallikarjuna**
     Member of Parliament, Governing Body Member, BEA
     Life Trustee of SS Life Care Trust, Davanagere
   - **Dr. Vidyashankar. S**
     Vice-Chancellor, Visvesvaraya Technological University, Belagavi
   - **Dr. B E Rangaswamy**
     Registrar, Visvesvaraya Technological University, Belagavi
8. Presidential remarks : **Prof. Y. Vrushabhendrappa**
   Director, BIET
9. Presentation by Principal : **Dr. H.B. Aravind**
   Principal, BIET, Davanagere
10. Entertainment : **Kalarava Cultural Club**
11. Vote of Thanks

Bapuji Educational Association (R.)

## Bapuji Institute of Engineering and Technology

An Autonomous Institute Affiliated to Visvesvaraya Technological University
Belagavi, Karnataka
Post Box No. 325, Shamanur Road, Davanagere - 577004, Karnataka

# INVITATION

## Launching of Autonomy & Felicitation to Dr. Prabha Mallikarjuna

Date : 24-09-2024, Tuesday Time : 10.30 AM
Venue : SSM Cultural Centre

**Cheif Guests :**

**Dr. Prabha Mallikarjuna**
Member of Parliament, Governing Body Member, BEA
Life Trustee of SS Life care Trust, Davanagere

**Dr. Vidyashankar. S**
Vice Chancellor, Visvesvaraya Technological University, Belagavi

**Dr. B.E. Rangaswamy**
Registrar, Visvesvaraya Technological University, Belagavi

**Dr. Aravind H.B.**
Principal, BIET, Davanagere

**Prof. Y. Vrushabhendrappa**
Director, BIET, Davanagere

***We Cordially invite all of You***

*Management, Director, Principal*
*Staff and Students of BIET, Davanagere*

vijayavani 24-09-2024

# ಬಿಐಇಟಿ ಸ್ವಾಯತ್ತ ಸಂಸ್ಥೆ ಉದ್ಘಾಟನೆ ಇಂದು

ದಾವಣಗೆರೆ: ಬಾಪೂಜಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯವು ಸ್ವಾಯತ್ತ ಸಂಸ್ಥೆಯಾಗಿ ವಿಟಿಯುನಿಂದ ಅನುಮತಿ ಪಡೆದಿದ್ದು, ಕಾಲೇಜು ಆವರಣದ ಎಸ್.ಎಸ್.ಮಲ್ಲಿಕಾರ್ಜುನ ಸಾಂಸ್ಕೃತಿಕ ಕೇಂದ್ರದಲ್ಲಿ ಮಂಗಳವಾರ ಬೆಳಗ್ಗೆ 10.30ಕ್ಕೆ ಉದ್ಘಾಟನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ವಿಟಿಯು ಕುಲಪತಿ ಡಾ.ಎಸ್. ವಿದ್ಯಾಶಂಕರ್, ಕುಲಸಚಿವ ಬಿ.ಇ.ರಂಗಸ್ವಾಮಿ, ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಪ್ರಾಚಾರ್ಯ ಡಾ.ಎಚ್.ಬಿ.ಅರವಿಂದ್, ಕಾಲೇಜಿನ ನಿರ್ದೇಶಕ ಪ್ರೊ.ವೈ.ವೃಷಭೇಂದ್ರಪ್ಪ ಉಪಸ್ಥಿತರಿರುವರು.

ನಗರವಾಣಿ 25-09-2024

# ಮೆಕ್ಯಾನಿಕಲ್ ಎಂಜಿನಿಯರ್‌ಗಳಿಗೆ ಮುಂದೆ ಬೇಡಿಕೆ ಬರಲಿದೆ–ವಿದ್ಯಾಶಂಕರ್



ದಾ. ನಗರವಾಣಿ ಸುದ್ದಿ

ದಾವಣಗೆರೆ.ಸೆ.24: 2047ಕ್ಕೆ ವಿಕಸಿತ ಭಾರತದ ಗುರಿಯೊಂದಿಗೆ ದೇಶವು ತಾಂತ್ರಿಕವಾಗಿ ಬೆಳೆಯುತ್ತಿದ್ದು, ಮುಂದೆ ಮೆಕ್ಯಾನಿಕಲ್ ಎಂಜಿನಿಯರ್ ಗಳಿಗೆ ಹೆಚ್ಚಿನ ಬೇಡಿಕೆ ಬರಲಿದೆ ಎಂದು ಬೆಳಗಾವಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಉಪ ಕುಲಪತಿ ಡಾ.ಎಸ್.ವಿದ್ಯಾಶಂಕರ್ ಹೇಳಿದರು.

ನಗರದ ಬಿಐಇಟಿ ಕಾಲೇಜಿನ ಎಸ್ಸೆಸ್ಸೆಂ ಸಾಂಸ್ಕೃತಿಕ ಕೇಂದ್ರದಲ್ಲಿ ಮಂಗಳವಾರ ಕಾಲೇಜಿಗೆ ಅಟಾನಮಸ್ ಸ್ಟೇಟಸ್ ಉದ್ಘಾಟನೆ ಮತ್ತು ನೂತನ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಸನ್ಮಾನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

ದೇಶ, ರಾಜ್ಯದಲ್ಲಿ ತಾಂತ್ರಿಕ ಕ್ಷೇತ್ರದ ಬೆಳವಣಿಗೆಯ ವೇಗ ಹೆಚ್ಚಿದೆ. ಪ್ರತಿ ನಾಲ್ಕು ವರ್ಷಕ್ಕೊಮ್ಮೆ ಎಂಜಿನಿಯರಿಂಗ್ ಕೋರ್ಸ್ ಗಳ ಬೇಡಿಕೆಯ ಪುನರಾವರ್ತನೆ ಚಕ್ರ ಬದಲಾಗುತ್ತದೆ. ಈಗ ಮೆಕ್ಯಾನಿಕಲ್ ಓದುತ್ತಿರುವ ವಿದ್ಯಾರ್ಥಿಗಳಿಗೆ ಮುಂದೆ ಉತ್ತಮ ಭವಿಷ್ಯ ಇದೆ. ಹಾಗಾಗಿ ಸ್ನೇಹಿತರು ಕಂಪ್ಯೂಟರ್ ಎಂಜಿನಿಯರಿಂಗ್ ಓದುತ್ತಿದ್ದಾರೆಂಬ ಕಾರಣಕ್ಕೆ ನೀವೂ ಅದನ್ನೆ ಓದಬೇಕು ಅಂದುಕೊಳ್ಳಬೇಡಿ. ಬೆಂಗಳೂರಿನ ದೊಡ್ಡಬಳ್ಳಾಪುರ ಸಮೀಪ ಮೆಕ್ಯಾನಿಕಲ್ ಹಬ್ ನಿರ್ಮಾಣವಾಗುತ್ತಿದ್ದು, ವಿದ್ಯಾರ್ಥಿಗಳು ತಂತ್ರಜ್ಞಾನ, ಅನ್ವೇಷಣೆಗೆ ಒತ್ತು ನೀಡಬೇಕು. ಯಂತ್ರಗಳ ಜೊತೆ ಕೆಲಸ ಮಾಡುವುದನ್ನು ರೂಢಿಸಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

ಐಐಟಿಯಿಂದ ಹೊರ ಬಂದ ಶೇ.80ರಷ್ಟು ಜನ ಇಂದು ನಿರುದ್ಯೋಗ ಎದುರಿಸುತ್ತಿದ್ದಾರೆ. ಹಾಗಾಗಿ ಪದವಿ ಪಡೆದ ಎಲ್ಲರಿಗೂ ಉದ್ಯೋಗ ದೊರಕಿಸಬೇಕು ಎಂಬುದು ವಿಟಿಯು ಗುರಿಯಾಗಿದೆ. ಈ ದಿಸೆಯಲ್ಲಿ ವಿಶ್ವವಿದ್ಯಾಲಯದಿಂದ ಹಲವು ಕ್ರಮ ಕೈಗೊಳ್ಳಲಾಗಿದೆ. ಆರ್ಟಿಫಿಶಿಯಲ್ ಇಂಟಲಿಜೆನ್ಸ್ ನಿಂದ ಉದ್ಯೋಗ ಕಡಿತದ ಆತಂಕ ಬೇಡ. ಅದರಿಂದ ಉದ್ಯೋಗ ಸೃಷ್ಟಿಯಾಗಲಿವೆಯೇ ಹೊರತು ಕಡಿತವಂತೂ ಆಗುವುದಿಲ್ಲ ಎಂದು ಅವರು ತಿಳಿಸಿದರು.

ಸನ್ಮಾನ ಸ್ವೀಕರಿಸಿ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಮಾತನಾಡಿ, ಬಿಐಇಟಿ ಈಗ ಅಟಾನಮಸ್ ಸ್ಟೇಟಸ್ ಪಡೆದಿದೆ. ಮುಂದೆಯೂ ತಮ್ಮ ಸಹಕಾರ ಹೀಗೆ–ಯೇ ಮುಂದುವರೆಯಲಿ. ಪ್ರಜಾಪ್ರಭುತ್ವದ ಯಶಸ್ಸಿಗೆ ಸಮರ್ಥ ವಿರೋಧ ಪಕ್ಷ ಬೇಕು. ನಾವು ಸಂಸತ್ ನಲ್ಲಿ 99 ಜನ ವಿರೋಧ ಪಕ್ಷವಾಗಿ ಕೆಲಸ ಮಾಡುತ್ತಿದ್ದೇವೆ. ಸರ್ಕಾರ ರೂಪಿಸುವ ಯೋಜನೆಗಳನ್ನು ಚರ್ಚಿಸಿ ನಿರ್ಣಾಯಕ ತೀರ್ಮಾನ ಕೈಗೊಳ್ಳುತ್ತೇವೆ. ಅಧಿವೇಶನದಲ್ಲಿ ಈಗಾಗಲೇ ಹಲವು ವಿಷಯಗಳನ್ನು ಚರ್ಚಿಸಿದ್ದೇನೆ. ದಾವಣಗೆರೆ ದೊಡ್ಡ ಎಂಪಿ ಕ್ಷೇತ್ರವಾಗಿದ್ದು, ನನ್ನ ಮೇಲೆ ನಂಬಿಕೆಯಿಟ್ಟು ಅವಕಾಶ ಕಲ್ಪಿಸಿದ ಮತದಾರರಿಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು.

ವಿಟಿಯು ರಿಜಿಸ್ಟ್ರಾರ್ ಡಾ.ಬಿ.ಇ.ರಂಗಸ್ವಾಮಿ, ಬಿಐಇಟಿ ನಿರ್ದೇಶಕ ಪ್ರೊ.ವೈ.ವೃಷಭೇಂದ್ರಪ್ಪ, ಪ್ರಾಚಾರ್ಯ ಡಾ.ಹೆಚ್.ಬಿ.ಅರವಿಂದ್ ಮತ್ತಿತರರು ಕಾರ್ಯಕ್ರಮದಲ್ಲಿ ಹಾಜರಿದ್ದರು.

vijayavani 25-09-2024

ವಿಟಿಯು ಕುಲಪತಿ ಡಾ. ವಿದ್ಯಾಶಂಕರ ಮಾಹಿತಿ | ಸ್ವಾಯತ್ತ ಸಂಸ್ಥೆಯಾಗಿ ಬಿಐಇಟಿ ಉದ್ಘಾಟನೆ

# ಪ್ರಶ್ನೆಪತ್ರಿಕೆ ಗುಣಮಟ್ಟದ ಮೇಲೆ ಕಣ್ಣು

■ ವಿಜಯವಾಣಿ ಸುದ್ದಿಜಾಲ ದಾವಣಗೆರೆ

ಸ್ವಾಯತ್ತ (ಅಟಾನಮಸ್) ಇಂಜಿನಿಯರಿಂಗ್ ಕಾಲೇಜುಗಳ ಪ್ರಶ್ನೆಪತ್ರಿಕೆಗಳ ಗುಣಮಟ್ಟದ ಮೇಲೆ ಕಣ್ಣಿಡಲು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಿಂದ ಸಮಿತಿಯೊಂದನ್ನು ರಚಿಸಲಾಗುವುದು ಎಂದು ವಿವಿಯ ಕುಲಪತಿ ಡಾ. ಎಸ್. ವಿದ್ಯಾಶಂಕರ ಹೇಳಿದರು.

ನಗರದ ಬಾಪೂಜಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯದಲ್ಲಿ ಮಂಗಳವಾರ, ಸ್ವಾಯತ್ತ ಸಂಸ್ಥೆಯಾಗಿ ಬಿಐಇಟಿ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಪರೀಕ್ಷೆ ಮುಗಿದ ನಂತರ ಸ್ವಾಯತ್ತ ಸಂಸ್ಥೆಗಳ ಪ್ರಶ್ನೆಪತ್ರಿಕೆಗಳನ್ನು ಸಮಿತಿಯು ಪರಿಶೀಲಿಸಲಿದೆ. ಅದರಲ್ಲಿ ಕಳಪೆ ಎಂದೆನಿಸಿದರೆ ಸುಧಾರಣೆ ತರುವಂತೆ ಸಂಬಂಧಿಸಿದ ಕಾಲೇಜುಗಳಿಗೆ ಎಚ್ಚರಿಕೆ ನೀಡಲಾಗುವುದು ಎಂದು ತಿಳಿಸಿದರು.

ಸ್ವಾಯತ್ತ ಸಂಸ್ಥೆಗಳಲ್ಲಿ ಉತ್ತೀರ್ಣರಾಗುವುದು ಸುಲಭ ಎನ್ನುವ ಭಾವನೆ ವಿದ್ಯಾರ್ಥಿಗಳಲ್ಲಿದೆ. ಕೆಲವು ಅಟಾನಮಸ್ ಸಂಸ್ಥೆಗಳಲ್ಲಿ ಪಠ್ಯಕ್ರಮದ ಗುಣಮಟ್ಟ ಕಳಪೆಯಾಗಿರುವುದು ನನ್ನ ಗಮನಕ್ಕೆ ಬಂದಿದೆ. ಆ ರೀತಿ ಆಗಬಾರದು ಎಂದು ಹೇಳಿದರು.

ಇದೇ ಮನಸ್ಥಿತಿಯಲ್ಲಿ ವಿದ್ಯಾರ್ಥಿಗಳು ಓದು ಮುಂದುವರಿಸಿದರೆ ಪದವಿ ಮುಗಿದ ನಂತರ ಉದ್ಯೋಗ ಪಡೆಯುವುದು ಕಠಿಣವಾಗಲಿದೆ. ಐ.ಐ.ಟಿ.ಯಂಥ ಉನ್ನತ ಸಂಸ್ಥೆಗಳಲ್ಲಿ ಓದಿದರೂ ಶೇ. 50 ರಷ್ಟು ಪದವೀಧರರಿಗೆ ಉದ್ಯೋಗ ದೊರಕಿಲ್ಲ. ಆದ್ದರಿಂದ ಗುಣಮಟ್ಟದ ಕಡೆಗೆ ಗಮನ ಹರಿಸಬೇಕು ಎಂದು ಸೂಚಿಸಿದರು.

ವಿಟಿಯುನ ಪಠ್ಯಕ್ರಮ ದೇಶದ ಇತರೆ ವಿವಿಗಳಿಗಿಂತ ಉತ್ತಮವಾಗಿದೆ ಎಂದು ರಾಷ್ಟ್ರಮಟ್ಟದಲ್ಲಿ ಮೆಚ್ಚುಗೆ ವ್ಯಕ್ತವಾಗಿದೆ. ಚಾಯ್ಸ್ ಆಧಾರಿತ ಕ್ರೆಡಿಟ್ ವ್ಯವಸ್ಥೆ, ಕೇವಲ 3 ಗಂಟೆಗಳಲ್ಲಿ ಫಲಿತಾಂಶ ಪ್ರಕಟಣೆ, ಜುಲೈ ತಿಂಗಳಲ್ಲಿ ಮತ್ತೊಂದು ಘಟಿಕೋತ್ಸವ ಹೀಗೆ 'ವಿದ್ಯಾರ್ಥಿ ಕೇಂದ್ರಿತ' ವಿಶ್ವವಿದ್ಯಾಲಯವಾಗಿ ರೂಪುಗೊಂಡಿದೆ ಎಂದು ವಿವರಿಸಿದರು.

ಉದ್ಯಮ ವಲಯದ ನಿರೀಕ್ಷೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ವಿದ್ಯಾರ್ಥಿಗಳಲ್ಲಿ ಕೌಶಲ ಹೆಚ್ಚಿಸಲು ರಾಷ್ಟ್ರೀಯ ಕೌಶಲ ಅಭಿವೃದ್ಧಿ ನಿಗಮದೊಂದಿಗೆ ವಿವಿ ಒಡಂಬಡಿಕೆ ಮಾಡಿಕೊಂಡಿದೆ. ಅಂತಾರಾಷ್ಟ್ರೀಯ ಇಂಟರ್ನ್‌ಶಿಪ್‌ಗೆ ಹೋಗಲು ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ವಿಟಿಯು ಕುಲಸಚಿವ ಡಾ.ಬಿ.ಇ. ರಂಗಸ್ವಾಮಿ, ಬಿಐಇಟಿ ಪ್ರಾಚಾರ್ಯ ಡಾ.ಎಚ್.ಬಿ. ಅರವಿಂದ, ನಿರ್ದೇಶಕ ಪ್ರೊ.ವೈ. ವೃಷಭೇಂದ್ರಪ್ಪ ಇದ್ದರು. ಕಂಪ್ಯೂಟರ್ ಸೈನ್ಸ್ (ಬಿಜಿನೆಸ್ ಸಿಸ್ಟಂ) ವಿಭಾಗದ ಮುಖ್ಯಸ್ಥೆ ವಿನುತಾ ಸ್ವಾಗತಿಸಿದರು. ಶಾಲಿನಿ ನೃತ್ಯ ಪ್ರದರ್ಶನ ನೀಡಿದರು.



ದಾವಣಗೆರೆಯ ಬಾಪೂಜಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯದಲ್ಲಿ ಮಂಗಳವಾರ, ಸ್ವಾಯತ್ತ ಸಂಸ್ಥೆಯ ಉದ್ಘಾಟನಾ ಕಾರ್ಯಕ್ರಮದಲ್ಲಿ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್, ಕುಲಪತಿ ಡಾ. ಎಸ್. ವಿದ್ಯಾಶಂಕರ, ಕುಲಸಚಿವ ಡಾ.ಬಿ.ಇ. ರಂಗಸ್ವಾಮಿ, ಬಿಐಇಟಿ ಪ್ರಾಚಾರ್ಯ ಡಾ.ಎಚ್.ಬಿ. ಅರವಿಂದ, ನಿರ್ದೇಶಕ ಪ್ರೊ.ವೈ. ವೃಷಭೇಂದ್ರಪ್ಪ ಇದ್ದರು.

## ಮೆಕ್ಯಾನಿಕಲ್ ಇಂಜಿನಿಯರ್‌ಗೆ ಬೇಡಿಕೆ

ಭಾರತ ಉತ್ಪಾದನಾ ಕಾರ್ಖಾನೆಗಳ ಕೇಂದ್ರವಾಗಲಿದ್ದು ಮುಂಬರುವ ದಿನಗಳಲ್ಲಿ ಮೆಕ್ಯಾನಿಕಲ್ ಇಂಜಿನಿಯರಿಂಗ್ ಪದವೀಧರರಿಗೆ ಬೇಡಿಕೆ ಬರಲಿದೆ ಎಂದು ವಿದ್ಯಾಶಂಕರ ಅಭಿಪ್ರಾಯಪಟ್ಟರು. ಬೆಂಗಳೂರು ಸುತ್ತಮುತ್ತ, ದೊಡ್ಡಬಳ್ಳಾಪುರ ಭಾಗದಲ್ಲಿ ಹಲವಾರು ಉತ್ಪಾದನಾ ಘಟಕಗಳು ಸ್ಥಾಪನೆಯಾಗಲಿವೆ. ಅವಕಾಶಗಳ ಬಾಗಿಲು ತೆರೆಯಲಿದೆ ಎಂದು ತಿಳಿಸಿದರು. ವಿದ್ಯಾರ್ಥಿಗಳು ಕೇವಲ ಕಂಪ್ಯೂಟರ್ ಸೈನ್ಸ್, ಇನ್‌ಫಾರ್ಮೇಶನ್ ಸೈನ್ಸ್, ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ ವಿಭಾಗಗಳಿಗೆ ಜೋತು ಬೀಳಬಾರದು. ದೇಶಕ್ಕೆ ಮೆಕ್ಯಾನಿಕಲ್, ಸಿವಿಲ್ ಇಂಜಿನಿಯರುಗಳ ಅಗತ್ಯವೂ ಇದೆ. 4 ವರ್ಷಗಳಿಗೊಮ್ಮೆ ಚಕ್ರ ತಿರುಗುತ್ತದೆ ಎಂದರು. 2047 ರ ಹೊತ್ತಿಗೆ ವಿಕಸಿತ ಭಾರತದ ಕನಸಿದೆ. ಆದರೆ ತಂತ್ರಜ್ಞಾನದಲ್ಲಿ ವಿದೇಶಿ ಅವಲಂಬನೆ ತಪ್ಪಿಲ್ಲ.

ದೇಶೀಯವಾಗಿ ತಂತ್ರಜ್ಞಾನ ಅಭಿವೃದ್ಧಿಪಡಿಸುವ ಆಶಯದೊಂದಿಗೆ ವಿವಿ ಹ್ಯಾಕಥಾನ್ ಆಯೋಜಿಸುತ್ತಿದೆ. ವಿದ್ಯಾರ್ಥಿಗಳು ಆವಿಷ್ಕಾರ ಮಾಡಬೇಕು ಎಂದು ತಿಳಿಸಿದರು. ಕೃತಕ ಬುದ್ಧಿಮತ್ತೆ ತಂತ್ರಜ್ಞಾನವು ಉದ್ಯೋಗ ಕಸಿಯುವುದಿಲ್ಲ, ಬದಲಾಗಿ ಹೊಸ ಸ್ವರೂಪದ ಕೆಲಸಗಳು ಸೃಷ್ಟಿಯಾಗಲಿವೆ ಎಂದು ಹೇಳಿದರು.

## ಉದ್ಯೋಗ ಸೃಷ್ಟಿ ಮಾಡಿ

ಇಂಜಿನಿಯರಿಂಗ್ ಪದವಿ ಪಡೆದ ನಂತರ ವಿದ್ಯಾರ್ಥಿಗಳು ಕೆಲಸ ಹುಡುಕಿಕೊಂಡು ಹೋಗುವ ಬದಲು ಉದ್ಯೋಗ ಸೃಷ್ಟಿ ಮಾಡುವ ಮೂಲಕ ರಾಷ್ಟ್ರ ನಿರ್ಮಾಣ ಕಾರ್ಯದಲ್ಲಿ ಕೈಜೋಡಿಸಬೇಕು ಎಂದು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಹೇಳಿದರು. ಬಡವರಿಗೆ ಉಪಯೋಗವಾಗುವ ರೀತಿ ಸಂಶೋಧನೆ ನಡೆಸಬೇಕು. ಸರ್ಕಾರದ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ತಲುಪುವುದಕ್ಕೆ ನೆರವಾಗುವ ತಂತ್ರಜ್ಞಾನ ಅಭಿವೃದ್ಧಿ ಪಡಿಸಬೇಕು ಎಂದರು. ಸರ್ಕಾರಿ ಶಾಲೆಗಳಲ್ಲಿ ಓದಿದ ಕನ್ನಡ ಮಾಧ್ಯಮ ವಿದ್ಯಾರ್ಥಿಗೆ ವೃತ್ತಿ ಶಿಕ್ಷಣಕ್ಕೆ ಪೂರಕವಾಗಿ ಕೌಶಲ ಬೆಳೆಸಿಕೊಳ್ಳಲು ಕಾರ್ಯಕ್ರಮ ರೂಪಿಸುವಂತೆ ವಿಟಿಯು ಕುಲಪತಿ ಡಾ. ವಿದ್ಯಾಶಂಕರ ಅವರಿಗೆ ಸಲಹೆ ನೀಡಿದರು. ವಿದ್ಯಾರ್ಥಿಗಳು ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಕೊಳ್ಳಬೇಕು. ಎನ್‌ಎಸ್ ಕೇರ್ ಟ್ರಸ್ಟ್‌ನ ವಿದ್ಯಾರ್ಥಿ ವಿಭಾಗದ ಸದಸ್ಯರಾಗಿ ಸಾಮಾಜಿಕ ಚಟುವಟಿಕೆಗಳಲ್ಲಿ ಭಾಗಿಯಾಗುವಂತೆ ತಿಳಿಸಿದರು. ಸಂಸತ್ತಿನ ಸದನ ಕಲಾಪಗಳಲ್ಲಿ ಭಾಗವಹಿಸಿ ವಿಪಕ್ಷದ ಸದಸ್ಯರಾಗಿ ತಾವು ಕೆಲಸ ಮಾಡುತ್ತಿದ್ದು ಕ್ಷೇತ್ರದ ಅಭಿವೃದ್ಧಿ ಕನಸು ಹೊಂದಿರುವುದಾಗಿ ಹೇಳಿದರು.

Prajavani 25-09-2024

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಕುಲಪತಿ ಎಸ್.ವಿದ್ಯಾಶಂಕರ್ ಕಳವಳ

# ಶಿಕ್ಷಣದ ಗುಣಮಟ್ಟ ಕುಸಿದರೆ ಅಪಾಯ

ಪ್ರಜಾವಾಣಿ ವಾರ್ತೆ



ದಾವಣಗೆರೆಯ ಬಿಐಟಿ ಕಾಲೇಜಿನ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ ಕಾರ್ಯಕ್ರಮವನ್ನು ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಉದ್ಘಾಟಿಸಿದರು ಪ್ರಜಾವಾಣಿ ಚಿತ್ರ

**ಸ್ವಾಯತ್ತ ಕಾಲೇಜುಗಳ ಪರೀಕ್ಷಾ ಪದ್ಧತಿ ಹಾಗೂ ಪಠ್ಯಕ್ರಮದ ಪರಿಶೀಲನೆಗೆ ಸಮಿತಿ ರಚಿಸಲಾಗುವುದು. ಗುಣಮಟ್ಟದ ಶಿಕ್ಷಣ ಸಿಗದಿದ್ದರೆ ಕೈಗಾರಿಕಾ ವಲಯದಲ್ಲಿ ಉದ್ಯೋಗಕ್ಕೆ ತೊಂದರೆಯಾಗುತ್ತದೆ.**

**ಎಸ್.ವಿದ್ಯಾಶಂಕರ್,** ಕುಲಪತಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ

ದಾವಣಗೆರೆ: ಎಂಜಿನಿಯರಿಂಗ್ ಶಿಕ್ಷಣದ ಗುಣಮಟ್ಟ ಕುಸಿದರೆ ಪದವೀಧರರು ಕೈಗಾರಿಕಾ ವಲಯದಲ್ಲಿ ಉದ್ಯೋಗ ಗಿಟ್ಟಿಸಿಕೊಳ್ಳಲು ಕಷ್ಟವಾಗುತ್ತದೆ. ಉತ್ತೀರ್ಣತೆಯ ಪ್ರಮಾಣ ಹೆಚ್ಚಿಸಲು ಶಿಕ್ಷಣದ ಗುಣಮಟ್ಟದಲ್ಲಿ ರಾಜಿ ಮಾಡಿಕೊಳ್ಳುವುದು ಸರಿಯಲ್ಲ ಎಂದು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಕುಲಪತಿ ಎಸ್.ವಿದ್ಯಾಶಂಕರ್ ಅಭಿಪ್ರಾಯಪಟ್ಟರು.

ಸ್ವಾಯತ್ತತೆಯ ಮಾನ್ಯತೆ ಪಡೆದಿರುವ ಬಾಪೂಜಿ ತಾಂತ್ರಿಕ ಕಾಲೇಜಿನ ಕಾರ್ಯಾರಂಭ ಹಾಗೂ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರಿಗೆ ಮಂಗಳವಾರ ಹಮ್ಮಿಕೊಂಡಿದ್ದ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

'ವಿಶ್ವವಿದ್ಯಾಲಯಕ್ಕಿಂತ ಸ್ವಾಯತ್ತ ಕಾಲೇಜುಗಳನ್ನು ಆಯ್ಕೆ ಮಾಡಿಕೊಳ್ಳುವ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಿದೆ. ಪಠ್ಯ ಹಾಗೂ ಪರೀಕ್ಷೆ ಸುಲಭವಾಗಿರುತ್ತದೆ ಎಂಬ ಕಾರಣಕ್ಕೆ ಈ ಆಸಕ್ತಿ ಮೂಡಿರುವುದು ಗಮನಕ್ಕೆ ಬಂದಿದೆ. ಉತ್ತೀರ್ಣತೆಯ ಪ್ರಮಾಣ ಹೆಚ್ಚಿಸಿಕೊಳ್ಳುವ ಕಾರಣಕ್ಕೆ ಪಠ್ಯಕ್ರಮ, ಪರೀಕ್ಷೆ ಹಾಗೂ ಬೋಧನೆಯಲ್ಲಿ ಸುಲಲಿತ ಮಾರ್ಗಗಳನ್ನು ಅನುಸರಿಸುವುದು ಸರಿಯಲ್ಲ' ಎಂದು ಹೇಳಿದರು.

'ದೇಶದಲ್ಲಿ ಪ್ರತಿ ವರ್ಷ ಲಕ್ಷಾಂತರ ಎಂಜಿನಿಯರಿಂಗ್ ಪದವೀಧರರು ಹೊರಬರುತ್ತಿದ್ದಾರೆ. ಸ್ಪರ್ಧಾತ್ಮಕ ಯುಗದಲ್ಲಿ ಉದ್ಯೋಗ ಗಿಟ್ಟಿಸಿಕೊಳ್ಳುವ ಸವಾಲು ಎಲ್ಲರಿಗೂ ಎದುರಾಗಿದೆ. ಐಐಟಿ ಪದವೀಧರರಲ್ಲಿ ಎಲ್ಲರೂ ಉದ್ಯೋಗ ಹಿಡಿಯಲು ಸಾಧ್ಯವಾಗುತ್ತಿಲ್ಲ. ಹೀಗಾಗಿ, ಉತ್ತಮ ಪಠ್ಯಕ್ರಮ, ಮೂಲಸೌಲಭ್ಯ ಹೊಂದಿದ ಕಾಲೇಜು, ವಿಶ್ವವಿದ್ಯಾಲಯಗಳನ್ನು ಆಯ್ಕೆ ಮಾಡಿಕೊಳ್ಳಿ' ಎಂದು ಕಿವಿಮಾತು ತಿಳಿಸಿದರು.

'ವಿದ್ಯಾರ್ಥಿ ದಿಸೆಯಲ್ಲಿ ಸಂಶೋಧನೆ ಮತ್ತು ಆವಿಷ್ಕಾರದ ಕಡೆಗೆ ಹೆಚ್ಚು ಗಮನ ಹರಿಸಬೇಕು. ಕಠಿಣ ಪರಿಶ್ರಮದಿಂದ ಹೊಸ ತಾಂತ್ರಿಕ ಅನ್ವೇಷಣೆಗಳತ್ತ ಒಲವು ಬೆಳೆಸಿಕೊಳ್ಳಬೇಕು. ಕೃತಕ ಬುದ್ಧಿಮತ್ತೆ (ಎಐ) ತಂತ್ರಜ್ಞಾನದಿಂದ ಉದ್ಯೋಗಕ್ಕೆ ತೊಂದರೆಯಾಗುತ್ತದೆ ಎಂಬುದು ತಪ್ಪು ಕಲ್ಪನೆ. ಈ ತಂತ್ರಜ್ಞಾನವನ್ನು ಸಮರ್ಥವಾಗಿ ಬಳಸಿದರೆ ಉದ್ಯೋಗಾವಕಾಶ ಹೆಚ್ಚಾಗುತ್ತವೆ' ಎಂದರು.

'ಮಾಹಿತಿ ಮತ್ತು ತಂತ್ರಜ್ಞಾನ, ಕಂಪ್ಯೂಟರ್ ವಿಜ್ಞಾನ ಸೇರಿ ಸಾಫ್ಟ್‌ವೇರ್ ತಂತ್ರಜ್ಞಾನ ಕೇಂದ್ರಿತ ಕೋರ್ಸ್‌ಗಳ ಬಗ್ಗೆ ವ್ಯಾಮೋಹ ಹೆಚ್ಚಾಗುತ್ತಿದೆ. ಎಂಜಿನಿಯರಿಂಗ್ ಕ್ಷೇತ್ರದಲ್ಲಿ ಪ್ರತಿ ನಾಲ್ಕು ವರ್ಷಕ್ಕೊಮ್ಮೆ ಬದಲಾವಣೆಯ ಗಾಳಿ ಬೀಸುತ್ತದೆ. ಉತ್ಪಾದನಾ ವಲಯ ವಿಸ್ತರಣೆಯಾಗುತ್ತಿರುವುದರಿಂದ ಮೆಕ್ಯಾನಿಕಲ್ ಪದವೀಧರರಿಗೆ ಬೇಡಿಕೆ ಹೆಚ್ಚಾಗಲಿದೆ. ಭವಿಷ್ಯದ ಬದಲಾವಣೆಗಳನ್ನು ಗಮನಿಸಿ ಕೋರ್ಸ್ ಆಯ್ಕೆ ಮಾಡಿಕೊಳ್ಳಿ' ಎಂದು ಸಲಹೆ ನೀಡಿದರು.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಕುಲಸಚಿವ ಬಿ.ಇ.ರಂಗಸ್ವಾಮಿ, ಬಿಐಟಿ ಕಾಲೇಜಿನ ನಿರ್ದೇಶಕ ಪ್ರೊ.ವಿ.ವೃಷಭೇಂದ್ರಪ್ಪ, ಪ್ರಾಂಶುಪಾಲ ಎಚ್.ಬಿ.ಅರವಿಂದ್ ಇದ್ದರು.

# ‘ಮೆಕ್ಯಾನಿಕಲ್ ಎಂಜಿನಿಯರ್‌ಗೆ ಭವಿಷ್ಯ’

vijayakarnataka 25-09-2024

■ **ವಿಕ ಸುದ್ದಿಲೋಕ** ದಾವಣಗೆರೆ

ದೇಶ, ರಾಜ್ಯದಲ್ಲಿ ಮೆಕ್ಯಾನಿಕಲ್ ಕ್ಷೇತ್ರದ ಬೆಳವಣಿಗೆ ವೇಗ ಹೆಚ್ಚಿದ್ದು, ಮುಂದಿನ ದಿನಗಳಲ್ಲಿ ಮೆಕ್ಯಾನಿಕಲ್ ಎಂಜಿನಿಯರ್‌ಗಳಿಗೆ ಹೆಚ್ಚಿನ ಡಿಮ್ಯಾಂಡ್ ಬರಲಿದೆ ಎಂದು ಬೆಳಗಾವಿಯ ವಿಶ್ವೇಶ್ವರಯ್ಯ ಟೆಕ್ನಾಲಜಿಕಲ್ ವಿವಿ ಉಪ ಕುಲಪತಿ ಡಾ.ಎಸ್. ವಿದ್ಯಾಶಂಕರ್ ಹೇಳಿದರು.

ನಗರದ ಬಿಐಇಟಿ ಕಾಲೇಜಿನಲ್ಲಿ ಮಂಗಳವಾರ ಅಟಾನಮಿ ಸ್ಟೇಟಸ್ ಉದ್ಘಾಟನೆ ಮತ್ತು ನೂತನ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರಿಗೆ ಸನ್ಮಾನ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಮಾತನಾಡಿದರು.

''ಪ್ರತಿ ನಾಲ್ಕು ವರ್ಷಕ್ಕೊಮ್ಮೆ ಎಂಜಿನಿಯರ್ ಕೋರ್ಸ್‌ಗಳ ಡಿಮ್ಯಾಂಡ್ ಸೈಕಲ್ ಬದಲಾಗುತ್ತದೆ. ಈಗ ಮೆಕ್ಯಾನಿಕಲ್ ಓದುತ್ತಿರುವ ವಿದ್ಯಾರ್ಥಿಗಳಿಗೆ ಮುಂದೆ ಉತ್ತಮ ಭವಿಷ್ಯ ಇದೆ. ಯಾರೋ ತಮ್ಮ ಸ್ನೇಹಿತರು ಕಂಪ್ಯೂಟರ್ ಎಂಜಿನಿಯರಿಂಗ್ ಓದುತ್ತಿದ್ದಾರೆಂದು ತಾವು ಅದನ್ನೆ ಓದಬೇಕು ಎಂದು ಕೊಳ್ಳಬೇಡಿ. ಬೆಂಗಳೂರಿನ ದೊಡ್ಡ ಬಳ್ಳಾಪುರ ಬಳಿ ದೊಡ್ಡ ಮೆಕ್ಯಾನಿಕಲ್ ಹಬ್ ಸೃಷ್ಟಿಯಾಗುತ್ತಿದ್ದು, ಮುಂದೆ ಈ ಎಂಜಿನಿಯರ್‌ಗಳಿಗೆ ಡಿಮ್ಯಾಂಡ್ ಬರಲಿದೆ. 2047ಕ್ಕೆ ವಿಕಸಿತ ಭಾರತದ ಗುರಿಯಿದ್ದು, ತಾಂತ್ರಿಕವಾಗಿ ದೇಶ ಬೆಳೆಯುತ್ತಿದೆ. ವಿದ್ಯಾರ್ಥಿಗಳು ತಂತ್ರಜ್ಞಾನ, ಅನ್ವೇಷಣೆಗೆ ಒತ್ತು ನೀಡಬೇಕು. ಯಂತ್ರಗಳ ಜತೆ ಕೆಲಸ ಮಾಡುವುದನ್ನು ರೂಢಿಸಿಕೊಳ್ಳಬೇಕು'' ಎಂದರು.

**ಬಿಐಇಟಿ ಕಾಲೇಜಿನಲ್ಲಿ ಅಟಾನಮಿ ಸ್ಟೇಟಸ್ ಉದ್ಘಾಟನೆ**

**ಉದ್ಯೋಗದ ಗ್ಯಾರಂಟಿ:**

''ಇಂದು ಐಐಟಿಯಿಂದ ಹೊರ ಬಂದ ಶೇ.80ರಷ್ಟು ಮಂದಿಯೇ ನಿರುದ್ಯೋಗ ಎದುರಿಸುತ್ತಿದ್ದಾರೆ. ಹಾಗಾಗಿ ಪದವಿ ಪಡೆದ ಎಲ್ಲರಿಗೂ ಉದ್ಯೋಗ ಸಿಗಬೇಕು ಎನ್ನುವುದು ವಿಟಿಯು ಗುರಿಯಾಗಿದೆ. ವಿವಿ ಹಲವು ಕ್ರಮಗಳನ್ನು ಕೈಗೊಂಡಿದೆ. ಪರೀಕ್ಷೆ ಬರೆದ ಮೂರು ದಿನಕ್ಕೆ ಮತ್ತು ಒಂದು ವಾರಕ್ಕೆ ಫಲಿತಾಂಶ ಕೊಟ್ಟಿದ್ದೇವೆ. ಗುಣಮಟ್ಟದ ವಿಷಯದಲ್ಲಿ ವಿವಿ ತೆಗೆದುಕೊಂಡಿರುವ ಕ್ರಮಗಳನ್ನು ಕಾಲೇಜುಗಳು ವಿದ್ಯಾರ್ಥಿಗಳಿಗೆ ಮುಟ್ಟಿಸಬೇಕು. ಆರ್ಟಿಫಿಶಿಯಲ್ ಇಂಟಲಿಜೆನ್ಸಿಯಿಂದ ಉದ್ಯೋಗಗಳು ಕಡಿತ ಆಗಲಿದೆ ಎಂಬ ಆತಂಕವಿದೆ. ಆದರೆ ಎಐನಿಂದ ಉದ್ಯೋಗ ಕಡಿತ ಆಗಲ್ಲ, ಬದಲಿಗೆ ಉದ್ಯೋಗ ಸೃಷ್ಟಿಯಾಗಲಿದೆ'' ಎಂದು ಪ್ರತಿಪಾದಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್, ''ಬಿಐಇಟಿ ಈಗ ಅಟಾನಮಸ್ ಸ್ಟೇಟಸ್ ಪಡೆದಿದ್ದು, ಮೊದಲ ವರ್ಷದ ಎಂಜಿನಿಯರಿಂಗ್ ವಿದ್ಯಾರ್ಥಿಗಳು ಅಟಾನಮಸ್ ಕಾಲೇಜಿನಲ್ಲಿ ಕಲಿಯಲಿದ್ದಾರೆ. ಬಾಪೂಜಿ ವಿದ್ಯಾಸಂಸ್ಥೆಯ ಎಲ್ಲ ಉದ್ಯೋಗಿಗಳು ಒಂದು ಕುಟುಂಬ ಇದ್ದಂತೆ. ಬಿಐಇಟಿ ಅಟಾನಮಸ್ ಆಗಿದ್ದು ಮುಂದೆಯೂ ತಮ್ಮ ಸಹಕಾರ ಹೀಗೆಯೇ ಮುಂದುವರಿಯಲಿ'' ಎಂದು ಹೇಳಿದರು.

ಈ ವೇಳೆ ವಿಟಿಯು ರಿಜಿಸ್ಟ್ರಾರ್ ಡಾ.ಬಿ.ಇ. ರಂಗಸ್ವಾಮಿ, ಬಿಐಇಟಿ ನಿರ್ದೇಶಕ ವೈ. ವೃಷಭೇಂದ್ರಪ್ಪ, ಪ್ರಾಚಾರ್ಯ ಡಾ.ಎಚ್.ವಿ. ಅರವಿಂದ್ ಇದ್ದರು.



ದಾವಣಗೆರೆ ಬಿಐಇಟಿ ಕಾಲೇಜಿನಲ್ಲಿ ಮಂಗಳವಾರ ನಡೆದ ಅಟಾನಮಸ್ ಸ್ಟೇಟಸ್‌ನ್ನು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಉದ್ಘಾಟಿಸಿದರು. ವಿಟಿಯು ಉಪ ಕುಲಪತಿ ಡಾ.ಎಸ್. ವಿದ್ಯಾಶಂಕರ್ ಇತರರು ಇದ್ದರು.

### ವಿರೋಧ ಪಕ್ಷ ಬೇಕು

''ಪ್ರಜಾಪ್ರಭುತ್ವದ ಯಶಸ್ಸಿಗೆ ಸಮರ್ಥ ವಿರೋಧ ಪಕ್ಷ ಬೇಕು, ನಾವು ಸಂಸತ್‌ನಲ್ಲಿ 99 ಜನ ವಿರೋಧ ಪಕ್ಷವಾಗಿ ಕೆಲಸ ಮಾಡುತ್ತಿದ್ದೇವೆ. ಸರಕಾರ ರೂಪಿಸುವ ಯೋಜನೆಗಳ ಚರ್ಚಿಸಿ ನಿರ್ಣಾಯಕ ತೀರ್ಮಾನ ತೆಗೆದುಕೊಳ್ಳುತ್ತೇವೆ. ಅಧಿವೇಶನದಲ್ಲಿ ಹಲವು ವಿಷಯಗಳನ್ನು ಚರ್ಚಿಸಿದ್ದೇನೆ, ಮುಂದೆ ಚಳಿಗಾಲ ಅಧಿವೇಶನ ನಡೆಯಲಿದೆ. ದಾವಣಗೆರೆ ದೊಡ್ಡ ಎಂಪಿ ಕ್ಷೇತ್ರವಾಗಿದ್ದು ಮತದಾರರು ನನ್ನ ಮೇಲೆ ನಂಬಿಕೆಯಿಟ್ಟು ಈ ಅವಕಾಶ ಕಲ್ಪಿಸಿದ್ದಾರೆ'' ಎಂದು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಸ್ಮರಿಸಿದರು.

### ಅಟಾನಮಸ್ ಒಲವು, ಸಮಿತಿ ರಚನೆ

''ವಿದ್ಯಾರ್ಥಿಗಳು ಈಗ ಅಟಾನಮಸ್ ಕಾಲೇಜು ಬಗ್ಗೆ ಹೆಚ್ಚಿನ ಒಲವು ತೋರುತ್ತಿದ್ದಾರೆ. ಆದರೆ ವಿಟಿಯು ಗುಣಮಟ್ಟ ಚೆನ್ನಾಗಿಯೇ ಇದೆ, ಅಟಾನಮಸ್ ಕಾಲೇಜುಗಳ ಶೇ.80ರಷ್ಟು ಪಠ್ಯಕ್ರಮ ವಿಟಿಯುದ್ದೇ ಆಗಿದೆ. ಆದರೆ ಅಟಾನಮಸ್ ಕಾಲೇಜಿನಲ್ಲಿ ಪರೀಕ್ಷೆ ಸುಲಭವಾಗಿರುತ್ತದೆ ಎಂದು ವಿದ್ಯಾರ್ಥಿಗಳು ಆಯ್ಕೆ ಮಾಡಿಕೊಳ್ಳುತ್ತಿದ್ದಾರೆ. ಪರೀಕ್ಷೆ ಮುಗಿದ ನಂತರ ಅಟಾನಮಸ್ ಕಾಲೇಜುಗಳ ಪ್ರಶ್ನೆ ಪತ್ರಿಕೆಗಳ ಪರಿಶೀಲನೆಗೆ ಒಂದು ಸಮಿತಿ ರಚಿಸಲಾಗುವುದು, ಕಳಪೆಯೆಂದು ಕಂಡು ಬಂದರೆ ಸರಿಪಡಿಸಿಕೊಳ್ಳಲು ಎಚ್ಚರಿಕೆಯ ಸೂಚನೆ ನೀಡುತ್ತೇವೆ'' ಎಂದು ವಿಟಿಯು ಕುಲಪತಿ ಡಾ.ಎಸ್. ವಿದ್ಯಾಶಂಕರ್ ಹೇಳಿದರು.

25-09-2024

ಬಾಪೂಜಿ ಇಂಜಿನಿಯರಿಂಗ್-ತಾಂತ್ರಿಕ ಮಹಾವಿದ್ಯಾಲಯದಲ್ಲಿ ಸ್ವಾಯತ್ತ ಸಂಸ್ಥೆ ಬಿಐಇಟಿ ಉದ್ಘಾಟನೆ

# 'ಸ್ವಾಯತ್ತ ಇಂಜಿನಿಯರಿಂಗ್ ಕಾಲೇಜುಗಳ ಪಠ್ಯಕ್ರಮ ಕಳಪೆಯಾಗದಿರಲಿ'

■ **ಉದಯವಾಣಿ ಸಮಾಚಾರ**

**ದಾವಣಗೆರೆ:** ಕೆಲವೊಂದು ಸ್ವಾಯತ್ತ ಸಂಸ್ಥೆಗಳಲ್ಲಿ ಪಠ್ಯಕ್ರಮದ ಗುಣಮಟ್ಟ ಕಳಪೆಯಾಗಿರುವುದು ಕಂಡು ಬರುತ್ತಿದೆ. ಆ ರೀತಿಯಲ್ಲಿ ಆಗಬಾರದು ಎಂದು ಬೆಳಗಾವಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಕುಲಪತಿ ಡಾ। ಎಸ್. ವಿದ್ಯಾಶಂಕರ್ ಹೇಳಿದರು.

ಮಂಗಳವಾರ ಬಾಪೂಜಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯದಲ್ಲಿ ಸ್ವಾಯತ್ತ ಸಂಸ್ಥೆಯಾಗಿ ಬಿಐಇಟಿ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ಸ್ವಾಯತ್ತ ಇಂಜಿನಿಯರಿಂಗ್ ಕಾಲೇಜುಗಳ ಪ್ರಶ್ನೆಪತ್ರಿಕೆಗಳ ಗುಣಮಟ್ಟದ ಬಗ್ಗೆ ನಿಗಾವಹಿಸಲು ಸಮಿತಿ ರಚಿಸಲಾಗುವುದು ಎಂದು ತಿಳಿಸಿದರು.

ಇಂಜಿನಿಯರಿಂಗ್‌ನ ಎಲ್ಲ ಪರೀಕ್ಷೆ ಮುಗಿದ ನಂತರ ಸಮಿತಿ ಪ್ರಶ್ನೆಪತ್ರಿಕೆಗಳ ಪರಿಶೀಲನೆ ನಡೆಸಲಿದೆ. ಕಳಪೆ ಗುಣಮಟ್ಟದ್ದು ಎಂಬುದು ಕಂಡು ಬಂದಲ್ಲಿ ಸುಧಾರಣೆಗೆ ಎಚ್ಚರಿಕೆ ನೀಡಲಾಗುವುದು ಎಂದರು.



**ದಾವಣಗೆರೆ: ಸಂಸದೆ ಡಾ। ಪ್ರಭಾ ಮಲ್ಲಿಕಾರ್ಜುನ್ ಸ್ವಾಯತ್ತ ಬಿಐಇಟಿ ಸಂಸ್ಥೆಯನ್ನು ಉದ್ಘಾಟಿಸಿದರು.**

■ **ಪ್ರಶ್ನೆಪತ್ರಿಕೆ ಗುಣಮಟ್ಟದ ಬಗ್ಗೆ ನಿಗಾ ವಹಿಸಲು ಸಮಿತಿ ರಚನೆ**

■ **ಬೆಳಗಾವಿ ವಿಶ್ವೇಶ್ವರಯ್ಯ ತಾಂತ್ರಿಕ ವಿವಿ ಕುಲಪತಿ ಡಾ। ವಿದ್ಯಾಶಂಕರ್ ಹೇಳಿಕೆ**

ಸ್ವಾಯತ್ತ ಇಂಜಿನಿಯರಿಂಗ್ ಸಂಸ್ಥೆಗಳಲ್ಲಿ ಉತ್ತೀರ್ಣರಾಗುವುದು ಸುಲಭ ಎನ್ನುವ ಭಾವನೆ ಇದೆ. ಅಂತಹ ಮನಸ್ಥಿತಿಯಲ್ಲಿ ವಿದ್ಯಾರ್ಥಿಗಳು ಓದು ಮುಂದುವರಿಸಿದರೆ ಪದವಿ ಮುಗಿದ ನಂತರ ಉದ್ಯೋಗ ಪಡೆಯುವುದು ಕಠಿಣವಾಗಲಿದೆ. ಐ.ಐ.ಟಿ. ಯಂಥ ಉನ್ನತ ಸಂಸ್ಥೆಗಳಲ್ಲಿ ಓದಿದರೂ ಶೇ.50 ರಷ್ಟು ಪದವೀಧರರಿಗೆ ಉದ್ಯೋಗ ದೊರಕಿಲ್ಲ. ಹಾಗಾಗಿ ಎಲ್ಲ ಸ್ವಾಯತ್ತ ಇಂಜಿನಿಯರಿಂಗ್ ಕಾಲೇಜುಗಳು ಗುಣಮಟ್ಟದ ಕಡೆಗೆ ಗಮನ ಹರಿಸಬೇಕು ಎಂದರು.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಚಾಯ್ಸ್ ಆಧಾರಿತ ಕ್ರೆಡಿಟ್ ವ್ಯವಸ್ಥೆ, ಕೇವಲ 3 ಗಂಟೆಗಳಲ್ಲಿ ಫಲಿತಾಂಶ ಪ್ರಕಟಣೆ, ಜುಲೈ ತಿಂಗಳಲ್ಲಿ ಮತ್ತೊಂದು ಘಟಿಕೋತ್ಸವ ಹೀಗೆ ವಿದ್ಯಾರ್ಥಿ ಕೇಂದ್ರಿತ ವಿಶ್ವವಿದ್ಯಾಲಯವಾಗಿದೆ. ವಿದ್ಯಾರ್ಥಿಗಳಲ್ಲಿ ಕೌಶಲ ಹೆಚ್ಚಿಸಲು ರಾಷ್ಟ್ರೀಯ ಕೌಶಲ್ಯ ಅಭಿವೃದ್ಧಿ ನಿಗಮದೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲಾಗಿದೆ. ಅಂತಾರಾಷ್ಟ್ರೀಯ ಇಂಟರ್ನ್‌ಶಿಪ್‌ಗೆ ಹೋಗಲು ಅವಕಾಶ ಕಲ್ಪಿಸಲಾಗಿದೆ ಎಂದರು.

ಸಂಸದೆ ಡಾ। ಪ್ರಭಾ ಮಲ್ಲಿಕಾರ್ಜುನ್ ಮಾತನಾಡಿ, ಇಂಜಿನಿಯರಿಂಗ್ ಪದವಿ ಪಡೆದ ನಂತರ ಕೆಲಸ ಹುಡುಕಿಕೊಂಡು ಹೋಗುವ ಬದಲು ಉದ್ಯೋಗ ಸೃಷ್ಟಿ ಮಾಡುವ ಮೂಲಕ ರಾಷ್ಟ್ರ ನಿರ್ಮಾಣ ಕಾರ್ಯದಲ್ಲಿ ತೊಡಗಬೇಕು. ಜನಸಾಮಾನ್ಯರಿಗೆ ಅನುಕೂಲ ಆಗುವಂತಹ ಸಂಶೋಧನೆ ನಡೆಸಬೇಕು. ಸರ್ಕಾರದ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ತಲುಪುವುದಕ್ಕೆ ನೆರವಾಗುವ ತಂತ್ರಜ್ಞಾನ ಅಭಿವೃದ್ಧಿ ಪಡಿಸಬೇಕು ಎಂದರು.

ಸರ್ಕಾರಿ ಶಾಲೆಗಳಲ್ಲಿ ಓದಿದ ಕನ್ನಡ ಮಾಧ್ಯಮ ವಿದ್ಯಾರ್ಥಿಗಳಿಗೆ ವೃತ್ತಿ ಶಿಕ್ಷಣಕ್ಕೆ ಪೂರಕವಾಗಿ ಕೌಶಲ್ಯ ಬೆಳೆಸಿಕೊಳ್ಳಲು ವಿಟಿಯು ಕಾರ್ಯಕ್ರಮ ರೂಪಿಸಬೇಕು. ಎಸ್.ಎಸ್. ಕೇರ್ ಟ್ರಸ್ಟ್ ವಿದ್ಯಾರ್ಥಿ ವಿಭಾಗದ ಸದಸ್ಯರಾಗಿ ಸಾಮಾಜಿಕ ಚಟುವಟಿಕೆಗಳಲ್ಲಿ ಭಾಗವಹಿಸಬೇಕು ಎಂದರು.

ವಿಟಿಯು ಕುಲಸಚಿವ ಡಾ। ಬಿ.ಇ. ರಂಗಸ್ವಾಮಿ, ಬಿಐಇಟಿ ಪ್ರಾಚಾರ್ಯ ಡಾ। ಎಚ್.ಬಿ. ಅರವಿಂದ, ನಿರ್ದೇಶಕ ಪ್ರೊ। ವೈ. ವೃಷಭೇಂದ್ರಪ್ಪ ಇತರರು ಇದ್ದರು.

Deccan Herald 25-09-2024

# Don't compromise on edu quality to enhance pass percentage: VTU V-C

## He asks students to focus on research and innovation



MP Prabha Mallikarjun lights a lamp to inaugurate the autonomous status of Bapuji Institute of Engineering and Technology and its academic activities, in Davangere on Tuesday. Visvesvaraya Technological University Vice-chancellor S Vidyashankar and others look on. DH PHOTO

DAVANGERE, DHNS

Visvesvaraya Technological University Vice-chancellor S Vidyashankar cautioned that engineering graduates would find it difficult to get jobs in the industrial sector if the quality of engineering education deteriorates.

He was speaking at a programme organised on Thursday to inaugurate the autonomous status of Bapuji Institute of Engineering and Technology and its academic activities. MP Prabha Mallikarjun was also felicitated on the occasion.

Vidyashankar said compromising on the quality of education to increase the pass percentage is not right. The number of students choosing autonomous colleges over universities has increased. This is due to the perception that the curriculum and examinations are easier. It is not right to adopt lenient methods in curriculum, examination, and teaching just to increase the pass percentage, he said.

### 'Choose colleges wisely'

"Every year, lakhs of engineering graduates are produced in the country. In this competitive era, everyone faces the challenge of securing a job. Not all IIT graduates are also able to find employment. Therefore, choose colleges and universities with excellent curriculum and infrastructure," Vidyashankar advised.

He called upon students to focus on research and innovation and develop an inclination towards new technological explorations through hard work. "It is a misconception that Artificial Intelligence (AI) technology will affect employment. If this technology is used effectively, job opportunities will increase," he said.

Admitting that courses centered around Information Technology, Computer Science, and Software Technology were drawing more students, he said the engineering field experiences winds of change every four years. As the manufacturing sector expands, the demand for mechanical graduates will increase. So, students must choose courses considering future changes, he suggested.

Visvesvaraya Technological University Registrar B E Rangaswamy, Prof V Rishabhendrappa, BIET Principal HB Aravind were present.

# ಮೆಕ್ಯಾನಿಕಲ್ ಇಂಜಿನಿಯರ್‌ಗಳಿಗೆ ಹೆಚ್ಚಿದ ಬೇಡಿಕೆ



**ಬಿಐಇಟಿ ಸ್ವಾಯತ್ತ ಸಂಸ್ಥೆ ಉದ್ಘಾಟನೆಯಲ್ಲಿ ಬೆಳಗಾವಿ ವಿಶ್ವೇಶ್ವರಯ್ಯ ತಾಂತ್ರಿಕ ವಿವಿ ಕುಲಪತಿ ಡಾ. ವಿದ್ಯಾಶಂಕರ್**

ದಾವಣಗೆರೆ, ಸೆ.25- ಉತ್ಪಾದನಾ ವಲಯ ವಿಸ್ತರಣೆಯಾಗುತ್ತಿರುವುದರಿಂದ ಮೆಕ್ಯಾನಿಕಲ್ ಇಂಜಿನಿಯರಿಂಗ್ ಪದವೀಧರರಿಗೆ ಬೇಡಿಕೆ ಹೆಚ್ಚಾಗಲಿದೆ. ದೇಶ ಮತ್ತು ರಾಜ್ಯದಲ್ಲಿ ಮೆಕ್ಯಾನಿಕಲ್ ಕ್ಷೇತ್ರದ ಬೆಳವಣಿಗೆಯ ವೇಗ ಕೂಡ ಹೆಚ್ಚುತ್ತಿದೆ ಎಂದು ಬೆಳಗಾವಿ ವಿಶ್ವೇಶ್ವರಯ್ಯ ತಾಂತ್ರಿಕ ವಿವಿ ಕುಲಪತಿ ಡಾ.ಎಸ್. ವಿದ್ಯಾಶಂಕರ್ ಹೇಳಿದರು.

ನಗರದ ಬಿಐಇಟಿ ಕಾಲೇಜು ಆವರಣದಲ್ಲಿರುವ ಎಸ್.ಎಸ್. ಮಲ್ಲಿಕಾರ್ಜುನ್ ಸಾಂಸ್ಕೃತಿಕ ಕೇಂದ್ರದಲ್ಲಿ ಬಿಐಇಟಿ ಸ್ವಾಯತ್ತ ಸಂಸ್ಥೆ ಉದ್ಘಾಟನೆ ಹಾಗೂ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್‌ಗೆ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ಇಂಜಿನಿಯರಿಂಗ್ ಕೋರ್ಸ್‌ಗಳ ಬೇಡಿಕೆ ಚಕ್ರ ಬದಲಾಗುತ್ತಿದೆ. ಮೆಕ್ಯಾನಿಕಲ್ ವಿದ್ಯಾರ್ಥಿಗಳಿಗೆ ಮುಂದೆ ಉತ್ತಮ ಭವಿಷ್ಯ ಇದೆ ಎಂದರು. ಭವಿಷ್ಯದ ಬದಲಾವಣೆಗಳನ್ನು ಗಮನಿಸಿ ಕೋರ್ಸ್‌ಗಳ ಆಯ್ಕೆ ಮಾಡಿಕೊಳ್ಳಿ ಎಂದು ಸಲಹೆ ನೀಡಿದರು.

ಇಂಜಿನಿಯರಿಂಗ್ ಶಿಕ್ಷಣದ ಗುಣಮಟ್ಟ ಕುಸಿದರೆ ಪದವೀಧರರು ಕೈಗಾರಿಕಾ ವಲಯದಲ್ಲಿ ಉದ್ಯೋಗ ಪಡೆಯಲು ಸಾಧ್ಯವಾಗದು. ಉತ್ತೀರ್ಣತೆಯ ಪ್ರಮಾಣ ಹೆಚ್ಚಿಸಲು ಶಿಕ್ಷಣದ ಗುಣಮಟ್ಟದಲ್ಲಿ ರಾಜೀ ಸಲ್ಲದು ಎಂದರು.

ಕೆಲವು ಸ್ವಾಯತ್ತ ಸಂಸ್ಥೆಗಳಲ್ಲಿ ಪಠ್ಯಕ್ರಮದ ಗುಣಮಟ್ಟ ಕಳಪೆಯಾಗಿರುವುದು ಕಂಡು ಬರುತ್ತಿದೆ. ಇದು ಆಗಬಾರದು. ಮುಂದಿನ ದಿನಗಳಲ್ಲಿ ಸ್ವಾಯತ್ತ ಇಂಜಿನಿಯರಿಂಗ್ ಕಾಲೇಜುಗಳ ಪ್ರಶ್ನೆಪತ್ರಿಕೆಗಳ ಗುಣಮಟ್ಟದ ಬಗ್ಗೆ ತೀವ್ರ ನಿಗಾವಹಿಸಲು ಸಮಿತಿ ರಚಿಸಲಾಗುವುದು ಎಂದು ಹೇಳಿದರು.

ಸ್ವಾಯತ್ತ ಸಂಸ್ಥೆಗಳಲ್ಲಿ ಉತ್ತೀರ್ಣರಾಗುವುದು ಸುಲಭ ಎನ್ನುವ ಭಾವನೆ ಇದೆ. ಅಂತಹ ಮನಸ್ಥಿತಿಯಲ್ಲಿ ವಿದ್ಯಾರ್ಥಿಗಳು ಓದು ಮುಂದುವರೆಸಿದರೆ ಪದವಿ ನಂತರ ಉದ್ಯೋಗ ಪಡೆಯುವುದು ಕಷ್ಟವಾಗಲಿದೆ. ಐಐಟಿಯಂತಹ ಉನ್ನತ ಸಂಸ್ಥೆಗಳಲ್ಲಿ ಓದಿದರೂ ಶೇ. 50 ರಷ್ಟು ಪದವೀಧರರಿಗೆ ಉದ್ಯೋಗ ಸಿಕ್ಕಿಲ್ಲ. ಹಾಗಾಗಿ ಎಲ್ಲಾ ಸ್ವಾಯತ್ತ ಇಂಜಿನಿಯರಿಂಗ್ ಕಾಲೇಜುಗಳು ಗುಣಮಟ್ಟದ ಕಡೆ ಗಮನಹರಿಸುವಂತೆ ಸಲಹೆ ನೀಡಿದರು.

ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಮಾತನಾಡಿ, ಇಂಜಿನಿಯರಿಂಗ್ ಪದವಿ ನಂತರ ಉದ್ಯೋಗ ಹುಡುಕಿ ಹೋಗುವ ಬದಲು ಉದ್ಯೋಗ ಸೃಷ್ಟಿ ಮಾಡುವ ಮೂಲಕ ರಾಷ್ಟ್ರ ನಿರ್ಮಾಣ ಕಾರ್ಯದಲ್ಲಿ ತೊಡಗಿಸಿಕೊಳ್ಳಬೇಕೆಂದು ಕರೆ ನೀಡಿದರು.

ಸಾಮಾನ್ಯ ಜನರಿಗೂ ಅನುಕೂಲವಾಗುವ ನಿಟ್ಟಿನಲ್ಲಿ ಸಂಶೋಧನೆಗಳಾಗಬೇಕು. ಸರ್ಕಾರಿ ಸವಲತ್ತುಗಳು ಅರ್ಹರಿಗೆ ತಲುಪುವುದಕ್ಕೆ ನೆರವಾಗುವ ತಂತ್ರಜ್ಞಾನ ಅಭಿವೃದ್ಧಿಪಡಿಸಬೇಕೆಂದು ಹೇಳಿದರು.

ಸರ್ಕಾರಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡಿದ ಕನ್ನಡ ಮಾಧ್ಯಮ ವಿದ್ಯಾರ್ಥಿಗಳಿಗೆ ವೃತ್ತಿ ಕೌಶಲ್ಯ ಶಿಕ್ಷಣಕ್ಕೆ ಪೂರಕವಾದ ಕಾರ್ಯಕ್ರಮಗಳನ್ನು ರೂಪಿಸುವಂತೆ ಸಲಹೆ ನೀಡಿದರು.

ವಿಟಿಯು ಕುಲಸಚಿವ ಡಾ. ಬಿ.ಇ. ರಂಗಸ್ವಾಮಿ, ಬಾಪೂಜಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಹೆಚ್.ಬಿ. ಅರವಿಂದ್, ಮಹಾವಿದ್ಯಾಲಯದ ನಿರ್ದೇಶಕ ಪ್ರೊ. ವೈ. ವೃಷಭೇಂದ್ರಪ್ಪ ಸೇರಿದಂತೆ, ಇತರೆ ಗಣ್ಯರು ಉಪಸ್ಥಿತರಿದ್ದರು.